## **ಕರ್ನಾಟಕ ಸರ್ಕಾರ**

ನಂ.ಗ್ರಾಅಪ/190/ಗ್ರಾಪಂಅ/2010

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 14-05-2012

### **ಸುತ್ತೋಲೆ**

ವಿಷಯ: ಗ್ರಾಮ ಪಂಚಾಯಿತಿಗಳು ತೆರಿಗೆಗಳನ್ನು ಪರಿಷ್ಕರಿಸುವ ಮತ್ತು ವಸೂಲಾತಿ ಮಾಡುವ ಬಗ್ಗೆ.

ಉಲ್ಲೇಖ:
1. ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ತೆರಿಗೆಗಳು ಮತ್ತು ಫೀಜುಗಳು) ನಿಯಮಗಳು, 1994.
2. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 380 ಗ್ರಾಪಂಅ 2002, ದಿನಾಂಕ: 24-05-2003.
3. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 380 ಗ್ರಾಪಂಅ 2002, ದಿನಾಂಕ: 27-08-2003.

---

ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ನ್ನು ಜಾರಿಗೊಳಿಸುವ ಮೂಲಕ ಹಾಗೂ ವಿಕೇಂದ್ರಿಕರಣದ ತತ್ವಕ್ಕನುಸಾರವಾಗಿ ರಾಜ್ಯದ ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಅನುದಾನ, ಪ್ರಕಾರ್ಯಗಳು ಹಾಗೂ ಸಿಬ್ಬಂದಿಗಳನ್ನು ಹಸ್ತಾಂತರಿಸಲಾಗಿದೆ. ಆಯಾ ಪ್ರಕಾರ್ಯಗಳನ್ನು ಆಯಾ ಹಂತಗಳಲ್ಲಿಯೇ ಅನುಷ್ಠಾನಗೊಳಿಸಲು ಅನುವಾಗುವಂತೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಎಲ್ಲಾ ಯೋಜನೆಗಳನ್ನು ಗ್ರಾಮ ಪಂಚಾಯಿತಿಯಿಂದ ಅನುಷ್ಠಾನಗೊಳಿಸುವ ಜವಾಬ್ದಾರಿಯನ್ನು ವಹಿಸಿದ್ದು, ಅದರಂತೆ ಪ್ರತಿ ಯೋಜನೆಯ ಅನುದಾನವನ್ನು ನೇರವಾಗಿ ಗ್ರಾಮ ಪಂಚಾಯಿತಿಗೆ ಬಿಡುಗಡೆ ಮಾಡಲಾಗುತ್ತಿದೆ. ಇದರಿಂದಾಗಿ ಗ್ರಾಮ ಪಂಚಾಯಿತಿಗಳು ಪರಿಣಾಮಕಾರಿಯಾಗಿ ಸ್ಥಳೀಯ ಸರ್ಕಾರದಂತೆ ಕಾರ್ಯನಿರ್ವಹಿಸಬೇಕಾಗಿದ್ದು, ಅವುಗಳ ಜವಾಬ್ದಾರಿ ಮತ್ತು ಕರ್ತವ್ಯಗಳು ಹೆಚ್ಚಾಗಿವೆ.

ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 199 ರಲ್ಲಿ ಗ್ರಾಮ ಪಂಚಾಯಿತಿಗಳು ಪಂಚಾಯಿತಿ ಪ್ರದೇಶದ ಪರಿಮಿತಿಗೊಳಗಿರುವ ಕೃಷಿ ತರಿಗೆ ನಿರ್ಧರಣೆಗೆ ಒಳಪಟ್ಟಿರದ ಕಟ್ಟಡಗಳು ಮತ್ತು ಭೂಮಿಗಳ ಮೇಲೆ ಹಾಗೂ ಗ್ರಾಮ ಪಂಚಾಯಿತಿಯು ಕುಡಿಯುವುದಕ್ಕೆ ಮತ್ತು ಇತರ ಉದ್ದೇಶಗಳಿಗಾಗಿ ನೀರು ಸರಬರಾಜು ಮಾಡಲು ತೆರಿಗೆ ವಿಧಿಸಲು ಅವಕಾಶ ಕಲ್ಪಿಸಲಾಗಿದೆ. **ಈ ಪ್ರಕರಣದಡಿಯಲ್ಲಿ ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ತೆರಿಗೆಗಳು ಮತ್ತು ಫೀಜುಗಳು) ನಿಯಮಗಳು, 1994 ನ್ನು ರಚಿಸಲಾಗಿದ್ದು, ಇದರಲ್ಲಿ ತೆರಿಗೆ ಮತ್ತು ಫೀಜುಗಳನ್ನು ವಿಧಿಸಲು ಗ್ರಾಮ ಪಂಚಾಯಿತಿಗಳಿಗೆ ಅಧಿಕಾರ ನೀಡಲಾಗಿದೆ. ಪ್ರತಿ ನಾಲ್ಕು ವರ್ಷಗಳಿಗೆ ಒಂದು ಸಾರಿಗಿಂತ ಕಡಿಮೆಯಿಲ್ಲದಂತೆ ಸಂಪೂರ್ಣವಾಗಿ ತೆರಿಗೆಗಳನ್ನು ಪರಿಷ್ಕರಿಸಲು ಗ್ರಾಮ ಪಂಚಾಯಿತಿಗಳಿಗೆ ಅಧಿಕಾರ ನೀಡಲಾಗಿದೆ.**

ಮೂರು ಹಂತದ ಪಂಚಾಯತ್ ರಾಜ್ ವ್ಯವಸ್ಥೆಯಲ್ಲಿ ಗ್ರಾಮ ಪಂಚಾಯಿತಿಗಳು ಮಾತ್ರ ತೆರಿಗೆ ವಿಧಿಸಲು ಅಧಿಕಾರಯುಕ್ತವಾಗಿರುತ್ತದೆ. **ಸದರಿ ಕರ್ತವ್ಯವನ್ನು ನೆರವೇರಿಸಲು ಅನುವಾಗುವಂತೆ ಸರ್ಕಾರವು ಮೇಲೆ ತಿಳಿಸಿರುವ ನಿಯಮಗಳು ಹಾಗೂ ಸುತ್ತೋಲೆಗಳ ಮುಖಾಂತರ ನಿರ್ದೇಶನಗಳನ್ನು ಆಗಿಂದಾಗ್ಗೆ ನೀಡಿದ್ದಾಗ್ಯೂ ಸಹ ಬಹಳಷ್ಟು ಗ್ರಾಮ ಪಂಚಾಯಿತಿಗಳು ತೆರಿಗೆ ಪರಿಷ್ಕರಣೆ, ತೆರಿಗೆ ವಸೂಲಾತಿಯಂತಹ ಪ್ರಮುಖ ವಿಷಯಗಳಲ್ಲಿ ನಿರ್ಲಕ್ಷ್ಯ ತೋರುತ್ತಿರುವುದು ಗ್ರಾಮ ಪಂಚಾಯಿತಿಗಳ ತೆರಿಗೆಯ ಬೇಡಿಕೆ, ವಸೂಲಾತಿ ಮತ್ತು ಬಾಕಿ (ಡಿ.ಸಿ.ಬಿ.) ಪಟ್ಟಿಯಿಂದ ತಿಳಿದುಬರುತ್ತಿದೆ.**

2011-12ನೇ ಸಾಲಿನಲ್ಲಿ ರಾಜ್ಯದಲ್ಲಿನ ಗ್ರಾಮ ಪಂಚಾಯಿತಿಗಳ ಒಟ್ಟು ತೆರಿಗೆ ವಸೂಲಾತಿ ಬೇಡಿಕೆ ₹508.10 ಕೋಟಿಗಳಿದ್ದು, 2012 ರ ಫೆಬ್ರವರಿ ತಿಂಗಳವರೆಗೆ ₹223.82 ಕೋಟಿಗಳನ್ನು ವಸೂಲಿ ಮಾಡಲಾಗಿದ್ದು, ₹284.29 ಕೋಟಿಗಳು ಬಾಕಿಯಿರುತ್ತದೆ. ಅಂದರೆ ಶೇಕಡವಾರು ವಸೂಲಾತಿಯ ಪ್ರಮಾಣ 44.05 ಆಗಿರುತ್ತದೆ.

ಸರ್ಕಾರವು **ಗ್ರಾಮ ಪಂಚಾಯಿತಿಗಳು ತೆರಿಗೆ ಪರಿಷ್ಕರಣೆ, ವಸೂಲಾತಿ, ಶುಲ್ಕ, ಉಪಕರ ಹಾಗೂ ಚರ ಮತ್ತು ಸ್ಥಿರಾಸ್ತಿಗಳಿಂದ ಬರುವ ಆದಾಯಗಳಿಂದ ತಮ್ಮ ಸ್ವಂತ ಸಂಪನ್ಮೂಲಗಳನ್ನು ವೃದ್ಧಿಸಿಕೊಳ್ಳಲು ವ್ಯಾಪಕ ಅವಕಾಶಗಳನ್ನು ನೀಡಿದ್ದಾಗ್ಯೂ ತೆರಿಗೆ ವಸೂಲಾತಿಯಲ್ಲಿ ಗ್ರಾಮ ಪಂಚಾಯಿತಿಗಳು ಆಸಕ್ತಿ ವಹಿಸದೆ ಸ್ವಂತ ಸಂಪನ್ಮೂಲದಿಂದ ಸಿಬ್ಬಂದಿ ವೇತನ ಪಾವತಿಸಲು ಸಹ ಸಾಧ್ಯವಾಗದಂತಹ ಪರಿಸ್ಥಿತಿ ನಿರ್ಮಾಣವಾಗಿರುವುದು ಅತ್ಯಂತ ಶೋಚನೀಯವಾಗಿದೆ.**

ಆದುದರಿಂದ ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು **ಉಲ್ಲೇಖಿತ ನಿಯಮಗಳು ಹಾಗೂ ಸುತ್ತೋಲೆಗಳಲ್ಲಿ ನೀಡಿರುವ ನಿರ್ದೇಶನದಂತೆ ಸಮಿತಿಗಳನ್ನು ರಚಿಸಿ 2012-13ನೇ ಸಾಲಿನಲ್ಲಿ ತೆರಿಗೆ ಪರಿಷ್ಕರಣೆಯನ್ನು ಕಡ್ಡಾಯವಾಗಿ ಮಾಡತಕ್ಕದ್ದು. ತೆರಿಗೆ ಪರಿಷ್ಕರಣೆ ಕಾರ್ಯಕ್ರಮವನ್ನು ದಿನಾಂಕ: 01-06-2012 ರಿಂದ ದಿನಾಂಕ: 30-09-2012 ರೊಳಗೆ ನಡೆಸಲು ಕ್ರಮ ವಹಿಸತಕ್ಕದ್ದು. ದಿನಾಂಕ: 15-10-2012 ರೊಳಗೆ ತೆರಿಗೆ ಪರಿಷ್ಕರಣೆ ಕೈಗೊಂಡ ಬಗ್ಗೆ** ಸಂಕ್ಷಿಪ್ತ ವರದಿಯನ್ನು ಜಿಲ್ಲಾ ಪಂಚಾಯಿತಿ ಹಂತದಲ್ಲಿ ಕ್ರೋಢೀಕರಿಸಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ಮೇಲಿನ ಸೂಚನೆಗಳಂತೆ ಕ್ರಮ ವಹಿಸದಿದ್ದಲ್ಲಿ, ಅಂತಹ ಗ್ರಾಮ ಪಂಚಾಯಿತಿಗಳಿಗೆ ಸರ್ಕಾರವು ನೀಡುವ ಅನುದಾನವನ್ನು ಕಡಿತಗೊಳಿಸಲು ಕ್ರಮ ಜರುಗಿಸಲಾಗುವುದು.

**(ಡಾ: ಶಾಲಿನಿ ರಜನೀಶ್)**
ಸರ್ಕಾರದ ಕಾರ್ಯದರ್ಶಿ(ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

೧) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,
೨) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು,
೩) ಎಲ್ಲಾ ಗ್ರಾಮ ಪಂಚಾಯಿತಿಗಳ ಅಧ್ಯಕ್ಷರು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳು,
೪) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ, ಗ್ರಾ.ಅ.ಪ. ಇಲಾಖೆ.
೫) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.